# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 62(110) |
| ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ ರುದ್ರಪ್ಪ (ಪದವೀಧರ ಕ್ಷೇತ್ರ), |
| ಉತ್ತರಿಸುವ ದಿನಾಂಕ | : | 19/12/2022. |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಸಕಾಲ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅನುದಾನಿತ ಸಂಸ್ಥೆಗಳ ಶಿಕ್ಷಕ ಸಿಬ್ಬಂದಿ ವರ್ಗದವರಿಗೆ ಸೇವೆಗೆ ಸೇರಿದ ದಿನಾಂಕದಿಂದಲೇ ಸೇವಾ ಸೌಲಭ್ಯಗಳನ್ನು ಒದಗಿಸುವ ಕುರಿತು(ಕಾಲ್ಪನಿಕ ವೇತನ ಬಡ್ತಿ) ಸರ್ಕಾರ ತಕ್ಷಣ ಕ್ರಮ ಕೈಗೊಳ್ಳುವುದೇ; | ಅನುದಾನ ಸಂಹಿತೆಯ ಪ್ರಕಾರ ಅನುದಾನಕ್ಕೊಳಪಟ್ಟ ಸಿಬ್ಬಂದಿಗೆ ಅನುದಾನ ದೊರೆತ ದಿನಾಂಕದಿಂದ ಮಾತ್ರ ಕನಿಷ್ಟ ವೇತನ ನಿಗದಿ ಮಾಡಬೇಕು ಹಾಗೂ ಹಿಂದಿನ ಸೇವಾವಧಿಯನ್ನು ಯಾವುದೇ ಸೇವಾ ಸೌಲಭ್ಯಕ್ಕೆ ಪರಿಗಣಿಸುವಂತಿಲ್ಲ. ಈ ಸಂಬಂಧ ಸರ್ಕಾರವು ದಿನಾಂಕ:01.06.1995ರಿಂದಲೇ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂಧಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರೆ ಸೌಲಭ್ಯಗಳ ನಿಯಂತ್ರಣ) ಅಧಿನಿಯಮ 2014ನ್ನು ಜಾರಿಗೆ ತರಲಾಗಿದೆ.<br>ಈ ಅಧಿನಿಯಮವನ್ನು ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಪ್ರಶ್ನಿಸಿರುವ ರಿಟ್ ಅರ್ಜಿಗಳಾದ 21216/2014 ಮತ್ತು 14307/2014 ಮತ್ತು ತತ್ಸಬಂಧದ ಪ್ರಕರಣಗಳಲ್ಲಿ ಮಾನ್ಯ ಉಚ್ಚನ್ಯಾಯಾಲಯವು ದಿನಾಂಕ:10.07.2015ರಂದು ನೀಡಿದ ತೀರ್ಪಿನಲ್ಲಿ ಸದರಿ ಅಧಿನಿಯಮವನ್ನು "struck down" ಮಾಡಿರುತ್ತದೆ.<br>ಮೇಲಿನ ಮಾನ್ಯ ನ್ಯಾಯಾಲಯದ ತೀರ್ಪನ್ನು ಪ್ರಶ್ನಿಸಿ ಸರ್ಕಾರವು ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ ರಿಟ್ ಅಪೀಲು ಸಂಖ್ಯೆ:2476/2015 ಮತ್ತು 2467/2015ನ್ನು ದಾಖಲಿಸಿದೆ. ಮೇಲಿನ ರಿಟ್ ಅರ್ಜಿಗಳಲ್ಲಿ ನೀಡಿದ ತೀರ್ಪಿಗೆ ದಿನಾಂಕ:27.11.2015ರಂದು ತಡೆಯಾಜ್ಞೆ ನೀಡಿರುತ್ತದೆ. ಸದರಿ ತಡೆಯಾಜ್ಞೆಯು ಪ್ರಸ್ತುತ ಜಾರಿಯಲ್ಲಿದ್ದು, ಪ್ರಕರಣವು ಮಾನ್ಯ ನ್ಯಾಯಾಲಯದಲ್ಲಿ ಬಾಕಿಯಿರುತ್ತದೆ.<br>ಮಾನ್ಯ ಶ್ರೀ ಬಸವರಾಜ ಹೊರಟ್ಟಿರವರ ಅಧ್ಯಕ್ಷತೆಯ ಸಮಿತಿಯ ವರದಿ ಮತ್ತು ಇಲಾಖೆಗಳಲ್ಲಿನ ವಾಸ್ತವ ಅಂಕಿಅಂಶಗಳನ್ನು ಪರಿಶೀಲಿಸಲಾಗಿ, ಹಾಲಿ ನೀಡಲಾಗುತ್ತಿರುವ ವೇತನಕ್ಕೆ ಅನುದಾನ ರಹಿತ ಅವಧಿಯನ್ನು ಪರಿಗಣನೆಗೆ ತೆಗೆದುಕೊಂಡು ವೇತನವನ್ನು ಪರಿಷ್ಕರಿಸಿದಲ್ಲಿ ಹೆಚ್ಚುವರಿಯಾಗಿ ವಾರ್ಷಿಕವಾಗಿ ರೂ.359.87ಕೋಟಿಗಳ ಅನುದಾನವು ಬೇಕಾಗುತ್ತದೆ. ಆದರೆ, ಅವರಿಗೆ ಹಿಂಬಾಕಿ ಮತ್ತು ಪಿಂಚಣಿಗಾಗಿ ತಗಲುವ ಅಂದಾಜು ವೆಚ್ಚವು ಪ್ರಸ್ತಾಪಿತ ರೂ.359.87 ಕೋಟಿಗಳಲ್ಲಿ ಒಳಗೊಂಡಿರುವುದಿಲ್ಲ. ಸದರಿ ಮೊತ್ತವಾದ ರೂ.359.87/- ಕೋಟಿ ಒಂದು ವರ್ಷಕ್ಕೆ |
| ಆ) | ಸೇವೆಗೆ ಸೇರಿದ ದಿನಾಂಕವನ್ನು ಪರಿಗಣಿಸಿ ಪಿಂಚಣಿ, ನಿವೃತ್ತಿಯ ಉಪಲಬ್ಧಗಳನ್ನು ಕಲ್ಪಿಸಿಕೊಡಲು ಸಮಿತಿಗಳ ವರದಿಯನ್ವಯ ಸರ್ಕಾರ ಕ್ರಮಕೈಗೊಂಡು ಕಾರ್ಯಾನ್ವಯಗೊಳಿಸಲು ತೆಗೆದುಕೊಂಡ ಕ್ರಮಗಳೇನು; ಇಲ್ಲದಿದ್ದಲ್ಲಿ ಯಾವ ಕಾಲಮಿತಿಯೊಳಗೆ ಈ ಸಮಸ್ಯೆಯನ್ನು ಬಗೆಹರಿಸಲಾಗುವುದು: | |

| | | |
|---|---|---|
| | | ಬೇಕಾದ ಹೆಚ್ಚುವರಿ ಮೊತ್ತವಾಗುತ್ತದೆ. ಈ ಅನುಕೂಲ ಪಡೆಯುವ ಸಿಬ್ಬಂದಿ ಪೂರ್ಣ ಸೇವಾವಧಿಯಲ್ಲಿ ಪಡೆಯುವ ಒಟ್ಟು ಮೊತ್ತದ ಲೆಕ್ಕಾಚಾರ ಇಲಾಖೆಗಳಲ್ಲಿ ಇನ್ನೂ ಆಗಿರುವುದಿಲ್ಲ. ಹಾಗೆಯೇ ದಿನಾಂಕ:15.07.2015ರವರೆಗೆ ನಿವೃತ್ತಿ ಸೌಲಭ್ಯಗಳ ಒಟ್ಟಾರೆ ಆರ್ಥಿಕ ಹೊರೆ ಅಂದಾಜು ರೂ.1637 ಕೋಟಿಗಿಂತ ಹೆಚ್ಚಾಗಿದ್ದು, ಅನುದಾನರಹಿತ ಸೇವಾವಧಿಯ ಸಂಬಂಧ ನೀಡಬೇಕಾದ ವೇತನ ಬಾಕಿ ಮೊತ್ತವು ದಿನಾಂಕ:15.07.2015ರಂದು ರೂ.3083 ಕೋಟಿಗಳೆಂದು ಅಂದಾಜಿಸಲಾಗಿರುತ್ತದೆ. ದಿನಾಂಕ:31.03.2022ರವರೆಗೆ ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ಅನುದಾನರಹಿತ ಅವಧಿಯನ್ನು ನಿವೃತ್ತಿ ಮತ್ತು ಬಾಕಿ ವೇತನಕ್ಕೆ ಬೇಕಾಗುವ ವೆಚ್ಚವನ್ನು ಅಂದಾಜು ರೂ.9349.00ಕೋಟಿಗಳೆಂದು ಅಂದಾಜಿಸಲಾಗಿದೆ.<br>ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಕಾಲ್ಪನಿಕ ವೇತನ ಬಡ್ತಿಯನ್ನು ಜಾರಿಗೊಳಿಸುವ ಬಗ್ಗೆ ಸರ್ಕಾರಕ್ಕೆ ಯಾವುದೇ ನಿಲುವನ್ನು ತಳೆಯಲು ಸಾದ್ಯವಾಗಿರುವುದಿಲ್ಲ. |
| ಇ) | 1995ರ ನಂತರದಿಂದ ಆರಂಭವಾದ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ನಿಟ್ಟಿನಲ್ಲಿ ಸರ್ಕಾರದ ಕ್ರಮವೇನು; | |
| ಈ) | ಇಲ್ಲದಿದ್ದಲ್ಲಿ ಯಾವ ವರ್ಷದವರೆಗೆ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲು ಸರ್ಕಾರ ಚಿಂತಿಸಿದೆ; ಇದರಿಂದ ಸರ್ಕಾರಕ್ಕೆ ತಗಲುವ ಅಂದಾಜು ವೆಚ್ಚ ಎಷ್ಟು; ಮುಂಬರುವ ಬಜೆಟ್‌ನಲ್ಲಿ ಈ ಕುರಿತು ಕ್ರಮ ಕೈಗೊಳ್ಳಲು ಸರ್ಕಾರ ಉದ್ದೇಶಿಸಿದೆಯೇ; | 1995ರ ನಂತರದಿಂದ ಆರಂಭವಾದ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ. |
| ಉ) | ಉದ್ದೇಶಿಸಿದಲ್ಲಿ, ಯಾವ ವರ್ಷದವರೆಗೆ ಅನುದಾನ ನೀಡುವುದನ್ನು ನಿರೀಕ್ಷಿಸಬಹುದಾಗಿದೆ; ಈ ಕುರಿತು ಸರ್ಕಾರದ ನಿಲುವೇನು? (ಮಾಹಿತಿ ನೀಡುವುದು) | |

ಸಂಖ್ಯೆ: ಇಪಿ 613 ಎಸ್‌ಇಎಸ್ 2022

(ಬಿ.ಸಿ.ನಾಗೇಶ್)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ
ಹಾಗೂ ಸಕಾಲ ಸಚಿವರು